## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈಸೂರು ಜಿಲ್ಲೆ ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತುರ್ತು ಕಾಮಗಾರಿಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಕಾರ್ಯಪಾಲಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಮೈಸೂರು ರವರ ಪತ್ರ ಸಂಖ್ಯೆ:ಕಾಇಂ/ಪಂರಾಇಂ/ಮೈ/ಕಿ.ಇಂ.6/2011-12/1018, ದಿ:01.07.2011.

—

**ಪೀಠಿಕೆ:**

ಮೈಸೂರು ಜಿಲ್ಲೆ ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಕುರಿತು, ಕಾರ್ಯಪಾಲಕ ಇಂಜನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಮೈಸೂರು ಇವರು ವರಣಾ ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಪ್ರಸ್ತಾಪಿಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಜಾಗ್ರತೆಯಾಗಿ ವಿಶೇಷ ಅನುದಾನ ಬಿಡುಗಡೆ ಮಾಡಲು ಕರ್ನಾಟಕ ವಿಧಾನಸಭೆಯ ವಿರೋದ ಪಕ್ಷದ ನಾಯಕರ ಪ್ರಸ್ತಾಪ ಕುರಿತು ಸರ್ಕಾರವನ್ನು ವಿನಂತಿಸಿರುತ್ತಾರೆ. ಈಗಾಗಲೇ ಗ್ರಾಅಪಂ.ರಾಜ್ ಇಲಾಖೆಯೂ ಸಹ CRF/NCCFನಡಿ ಕುಡಿಯುವ ನೀರಿನ ಪರಿಹಾರ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಿರುವುದರಿಂದ, ಸಧ್ಯಕ್ಕೆ ರೂ.50.00ಲಕ್ಷ ಅನುದಾನವನ್ನು ಮೈಸೂರು ಜಿಲ್ಲೆ ವರಣಾ ಕ್ಷೇತ್ರವ್ಯಾಪ್ತಿಯಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನ ಸಂಬಂಧ ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 67 ಗ್ರಾನೀಸ(2)2011 ಬೆಂಗಳೂರು, ದಿನಾಂಕ:08.07.2011**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆ, ವರಣಾ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸ್ಥಳೀಯ ಅಗತ್ಯತೆಯನುಸಾರ 33 ಕುಡಿಯುವ ನೀರಿನ ಕಾಮಗಾರಿಗಳನ್ನು (ಉಲ್ಲೇಖಿತ ಪ್ರಸ್ತಾಪದನ್ವಯ) ಆದ್ಯತೆ ಮೇಲೆ ಬಿಡುಗಡೆಯಾದ ಅನುದಾನದ ಮಿತಿಯೊಳಗೆ ಅನುಷ್ಠಾನಗೊಳಿಸಲು ರೂ.50.00ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು 2011-12ನೇ ಸಾಲಿಗೆ ರಾಜ್ಯ ವಲಯದ C&Q ಘಟಕದಡಿ ಮೈಸೂರು ಜಿಲ್ಲಾ ಪಂಚಾಯತಿಗೆ ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸುವ (31 ಹೊಸ ಕಾಮಗಾರಿಗಳು) ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮಾಹಿತಿಗಾಗಿ ಕಳುಹಿಸುವುದು. ಕಾಮಗಾರಿ ಅನುಷ್ಠಾನಗೊಳಿಸುವ ಮುನ್ನ ಪ್ರಶ್ನಿತ ಕಾಮಗಾರಿಗಳು 2011-12ರ ಸಾಲಿನ ಕ್ರಿಯಾಯೋಜನೆಯಡಿ ಸೇರ್ಪಡೆಯಾಗದಿರುವುದನ್ನು (ಕೀಳನಪುರ ಮತ್ತು ಮೊಸಂಬಾಯನಹಳ್ಳಿ ಗ್ರಾನೀಸ ಕಾಮಗಾರಿಗಳು 2011-12ರ Action Planನಲ್ಲಿ ಸೇರಿವೆ) ಖಾತ್ರಿ ಪಡಿಸಿಕೊಳ್ಳತಕ್ಕದ್ದು. ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

3. ಈ ಅನುದಾನವನ್ನು ರಾಜ್ಯವಲಯದ ಲೆಕ್ಕಶೀರ್ಷಿಕೆ:4215-01-102-9-01-059ಯಡಿ ಗಣನೆಗೆ ತೆಗೆದುಕೊಂಡು, RTGS ಮುಖೇನ ಈಗಾಗಲೇ Coverage & Qualityಯಡಿ ಗೊತ್ತುಪಡಿಸಿರುವ SWSM ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸಿಂಡಿಕೇಟ್ ಬ್ಯಾಂಕ್, ಮೂಲ ಖಾತೆ ಸಂಖ್ಯೆ:04462010091577ರಿಂದ Coverage & Quality ಕಾರ್ಯಕ್ರಮದ ಖಾತೆ ಸಂಖ್ಯೆ:04462010094572ಕ್ಕೆ ರೂ.50.00ಲಕ್ಷಗಳನ್ನು ವರ್ಗಾಯಿಸಿ, ಸದರಿ ಅನುದಾನದಿಂದ C&Q ಘಟಕದಡಿ ಮೈಸೂರು ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ

ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು CE/PRED ಹಾಗೂ ಮೈಸೂರು, ಜಿಲ್ಲಾ ಪಂಚಾಯತ್ IMISನಡಿ ದಾಖಲಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: FD 149 Exp.6/2011, ದಿ:08.03.2011 ಹಾಗೂ ಗ್ರಾಅಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/03/ಅಂ.ಆ.ಸ/2011, ದಿ:01.04.2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಇವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಆಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್,.. ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ಮಾನ್ಯ ವಿರೋಧ ಪಕ್ಷದ ನಾಯಕರು, ಕರ್ನಾಟಕ ವಿದಾನಸಭೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂಗಳೂರು-1.
13. ಜಿಲ್ಲಾಧಿಕಾರಿಗಳು, ಮೈಸೂರು.
14. ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಮೈಸೂರು.
15. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ಮೈಸೂರು.
16. ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಮೈಸೂರು, ನಂಜನಗೂಡು ಮತ್ತು ಟಿ.ನರಸೀಪುರ.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು, ಮೈಸೂರು.
18. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್, ಮೈಸೂರು.
19. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20.
20. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ,ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
21. ನಿರ್ದೇಶಕರು KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
22. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಪುತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.